ಶಾಶ್ವತ ಅನುದಾನ ರಹಿತ ಖಾಸಗಿ ಪ್ರೌಢ ಶಾಲೆಗಳ ಸಂಖ್ಯೆ

2179 - ಶ್ರೀ ಜೆ. ಸಿ. ಮಾಧುಸ್ವಾಮಿ (ಚಿಕ್ಕನಾಯಕನಹಳ್ಳಿ) : ಮಾನ್ಯ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು. ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕರ್ನಾಟಕ ರಾಜ್ಯದಲ್ಲಿರುವ ಶಾಶ್ವತ ಅನುದಾನ ರಹಿತ ಖಾಸಗಿ ಪ್ರೌಢಶಾಲೆಗಳ ಸಂಖ್ಯೆ ಎಷ್ಟು?

ಆ) ಇಂತಹ ಶಾಲೆಗಳಲ್ಲಿ ಪಾಠ ಮಾಡುತ್ತಿರುವ ಶಿಕ್ಷಕರಿಗೆ ಕನಿಷ್ಠ ವೇತನವನ್ನಾದರೂ ಕೊಡಲಾಗುತ್ತಿದೆಯೇ?

ಇ) ಇಲ್ಲವಾದಲ್ಲಿ, ಇದು ಕಾನೂನು ಬಾಹಿರವಲ್ಲವೇ?

ಈ) ಇಂತಹ ಶಿಕ್ಷಕರು ಸಂಬಳವಿಲ್ಲವೆಂಬ ಕಾರಣಕ್ಕಾಗಿ ಮಕ್ಕಳಿಗೆ ಸರಿಯಾಗಿ ಪಾಠ ಪ್ರವಚನ ನೆಡಸಲು ಜವಾಬ್ದಾರಿಯಾಗಿ ವರ್ತಿಸುತ್ತಿದ್ದಾರೆಯೇ?

ಉ) ಹಾಗಿಲ್ಲದಿದ್ದಲ್ಲಿ ಇದರಿಂದಾಗಿ ಮಕ್ಕಳ ಭವಿಷ್ಯ ಹಾಳಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಶ್ರೀ ಹೆಚ್. ಜಿ. ಗೋವಿಂದೇಗೌಡ (ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು.) :

ಅ) 2846

ಆ) ಇಂತಹ ಶಿಕ್ಷಕರಿಗೆ ಆಡಳಿತ ಮಂಡಳಿಯವರು ವೇತನವನ್ನು ನೀಡುತ್ತಿದ್ದಾರೆ.

ಇ) ಪ್ರಶ್ನೆ ಉದ್ಭವಿಸುವುದಿಲ್ಲ.

ಈ) ಆಡಳಿತ ಮಂಡಳಿಯವರು ವೇತನ ನೀಡುತ್ತಿದ್ದು ಮಕ್ಕಳಿಗೆ ಶಿಕ್ಷಕರು ಸರಿಯಾಗಿ ಪಾಠ-ಪ್ರವಚನಗಳನ್ನು ಜವಾಬ್ದಾರಿಯುತವಾಗಿ ಬೋದಿಸದೆ ಇರುವ ಬಗ್ಗೆ ಇಲಾಖೆ ಗಮನಕ್ಕೆ ಬಂದಿರುವುದಿಲ್ಲ.

ಉ) ಇಲ್ಲ

ಕೊಡಗಿನಲ್ಲಿ ಪ್ರಾಥಮಿಕ ಶಾಲೆಗಳ ನೂತನ ಕೊಠಡಿಗೆ ಬಿಡುಗಡೆಯಾದ ಹಣ

2180 - ಶ್ರೀ ಡಿ. ಎಸ್. ಮಾದಪ್ಪ (ಮಡಿಕೇರಿ) : ಮಾನ್ಯ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) 1995-96, 1996-97 ಮತ್ತು 1997-98ನೇ ಸಾಲಿನಲ್ಲಿ ಕೊಡಗಿನಲ್ಲಿ ಪ್ರಾಥಮಿಕ ಶಾಲೆಗಳ ನೂತನ ಕೊಠಡಿಗೆ ಬಿಡುಗಡೆಯಾದ ಹಣವೆಷ್ಟು?

ಆ) ಬಿಡುಗಡೆಯಾದ ಹಣ ಎಷ್ಟು? ಎಷ್ಟು ಶಾಲಾ ಕೊಠಡಿಗಳನ್ನು ನಿರ್ಮಿಸಲಾಗಿದೆ?

ಶ್ರೀ ಹೆಚ್. ಜಿ. ಗೋವಿಂದೇಗೌಡ (ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು.) :

ಅ) ಪ್ರಾಥಮಿಕ ಶಾಲಾ ಕೊಠಡಿಗಳ ನಿರ್ಮಾಣಕ್ಕೆಂದು ಬಿಡುಗಡೆಯಾದದ ಅನುದಾನದ ವಿವರ :

ಅ) 1995-96ನೇ ಸಾಲಿನಲ್ಲಿ - ರೂ. 22.50

ಆ) 1996-97ನೇ ಸಾಲಿನಲ್ಲಿ - ರೂ. 60.00

ಇ) 1997-98ನೇ ಸಾಲಿನಲ್ಲಿ - ಇನ್ನೂ ಅನುದಾನ ಬಿಡುಗಡೆಯಾಗಿರುವುದಿಲ್ಲ. ಸಧ್ಯದಲ್ಲಿ ಅನುದಾನವನ್ನು ಹಂತ ಹಂತವವಾಗಿ ಬಿಡುಗಡೆ ಮಾಡಲಾಗುವುದು.

ಅನುದಾನ ಬಿಡುಗಡೆ (ರೂ. ಲಕ್ಷಗಳಲ್ಲಿ)			ನಿರ್ಮಿಸಲಾದ ಶಾಲಾ ಕೊಠಡಿಗಳ ಸಂಖ್ಯೆ
ಅ) 1995-96	-	22.50	34
ಆ) 1996-97	-	60.00	92
ಇ) 1997-98	-	ಇನ್ನು ಅನುದಾನ ಬಿಡುಗಡೆಯಾಗಿರುವುದಿಲ್ಲ	-

ಶಿಗ್ಗಾಂವ ತಾಲ್ಲೂಕು ದುಂಡಸಿ ಅರಣ್ಯ ವ್ಯಾಪ್ತಿಯಲ್ಲಿ ವಿವಿಧ ಯೋಜನೆ ಕಾಮಗಾರಿಗಳು

2181 - ಶ್ರೀ ಮಂಜುನಾಥ ಸಿ. ಕೂನ್ನೂರು (ಶಿಗ್ಗಾಂವ್) : ಮಾನ್ಯ ಅರಣ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

1) ಶಿಗ್ಗಾಂವ್ ತಾಲ್ಲೂಕು ದುಂಡಸಿ ಅರಣ್ಯ ವ್ಯಾಪ್ತಿಯಲ್ಲಿ 1995-96ರಿಂದ 1997-98 ರವರೆಗೆ ವಿವಿಧ ಯೋಜನೆಯಡಿಯಲ್ಲಿ ತೆಗೆದುಕೊಂಡ ಕಾಮಗಾರಿಗಳು ಯಾವುವು?

2) ಇವುಗಳಿಗೆ ಎಷ್ಟು ಹಣ ಖರ್ಚು ಮಾಡಲಾಗಿದೆ?

3) ದುಂಡಸಿ ವಲಯದಲ್ಲಿ ಕಟ್ಟಿಗೆ ಹಾಗೂ ನೀಲಗಿರಿ ಗಿಡಗಳ ಹರಾಜಿನಿಂದ ಹಣ ಸಂಗ್ರಹಿಸಿ ಅವ್ಯವಹಾರ ನಡೆಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

4) ದುಂಡಸಿ ವಲಯದ ವ್ಯಾಪ್ತಿಯಲ್ಲಿ ಕಳ್ಳಸಾಗಣೆಕೆಯಿಂದ ಕಟ್ಟಿಗೆ ಒಯ್ಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

5) ಹಾಗಿದ್ದಲ್ಲಿ ಈ ಬಗ್ಗೆ ಸರ್ಕಾರದವರು ತೆಗೆದುಕೊಂಡ ಕ್ರಮಗಳೇನು?